# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೩<br>Part – III | ಬೆಂಗಳೂರು, ಬುಧವಾರ, ೧೧, ಫೆಬ್ರವರಿ, ೨೦೨೬(ಮಾಘ, ೨೨, ಶಕವರ್ಷ, ೧೯೪೭)<br>BENGALURU, WEDNESDAY, 11, FEBRUARY, 2026(MAGHA, 22, SHAKAVARSHA, 1947) | ನಂ. ೧೫೨<br>No. 152 |
|---|---|---|

## ಜಿಲ್ಲಾಧಿಕಾರಿಗಳ ಕಾರ್ಯಾಲಯ, ಕೋಲಾರ ಜಿಲ್ಲೆ, ಕೋಲಾರ.

**(ಚುನಾವಣೆ ಶಾಖೆ)**

ನಂ. ಇಎಲ್‌ಎನ್ (2) ಸಿಆರ್/189/2025–26 ದಿನಾಂಕ : 11/02/2026

ವಿಷಯ : ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 41 ಮತ್ತು 42 ರಂತೆ ಅವಧಿ ಪೂರ್ಣಗೊಂಡಿರುವ / ಪೂರ್ಣಗೊಳ್ಳಲಿರುವ ಗ್ರಾಮ ಪಂಚಾಯ್ತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸುವ ಕುರಿತು.

ಉಲ್ಲೇಖ : ಸರ್ಕಾರದ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಪತ್ರ ನಂ.ಗ್ರಾಅಪ 1003 ಗ್ರಾಪಂಅ 2025 ದಿನಾಂಕ : 16/01/2026.

2. ತಹಶೀಲ್ದಾರ್, ಕೋಲಾರ ತಾಲ್ಲೂಕು ರವರ ಪತ್ರದ ಸಂಖ್ಯೆ:ಇಎಲ್‌ಎನ್: ಸಿಆರ್:36: 2025–26 ದಿನಾಂಕ: 09/02/2026.

.. .. .. ..

## <u>ಅಧಿಸೂಚನೆ</u>

ಕೋಲಾರ ಜಿಲ್ಲೆಯ ಗ್ರಾಮ ಪಂಚಾಯಿತಿಗಳ 5 ವರ್ಷಗಳ ಅವಧಿಯು ಫೆಬ್ರವರಿ 2026 ನೇ ಮಾಹೆಯಲ್ಲಿ ಮುಗಿಯುವುದರಿಂದ, ಗ್ರಾಮ ಪಂಚಾಯಿತಿಗಳಿಗೆ ಸಾರ್ವತ್ರಿಕ ಚುನಾವಣೆಯು ನಡೆದಿಲ್ಲವಾದ್ದರಿಂದ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 8(1)(ಬಿ)(**ii**)ರಡಿ ಆಡಳಿತಾಧಿಕಾರಿಯನ್ನು ನೇಮಿಸುವಂತೆ ಉಲ್ಲೇಖ (1) ರಂತೆ ಸರ್ಕಾರವು ನಿರ್ದೇಶಿಸಿರುವ ಹಿನ್ನೆಲೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 41 ಮತ್ತು 42 ರಂತೆ ಅವಧಿ ಪೂರ್ಣಗೊಂಡಿರುವ / ಪೂರ್ಣಗೊಳ್ಳಲಿರುವ ***<u>ಕೋಲಾರ ಜಿಲ್ಲೆಯ ಕೋಲಾರ ತಾಲ್ಲೂಕಿನ 32 ಗ್ರಾಮ ಪಂಚಾಯ್ತಿಗಳಿಗೆ</u>*** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 8(1)(ಬಿ)(**ii**)ರ ಪ್ರಕಾರ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ *<u>ಡಾ// ಎಂ. ಆರ್. ರವಿ ಭಾ.ಆ.ಸೇ.,</u>* ಜಿಲ್ಲಾಧಿಕಾರಿ, ಕೋಲಾರ ಜಿಲ್ಲೆ, ಕೋಲಾರ ಆದ ನಾನು ಈ ಕೆಳಕಂಡ ಕೋಷ್ಟಕದ ಅಂಕಣ 3 ರಲ್ಲಿ ನಮೂದಿಸಿರುವ ಗ್ರಾಮ ಪಂಚಾಯ್ತಿಗಳಿಗೆ ಅಂಕಣ 4 ರಲ್ಲಿ ನಮೂದಿಸಿರುವಂತೆ ಗ್ರಾಮ ಪಂಚಾಯಿತಿ ಸದಸ್ಯರುಗಳ 05 ವರ್ಷಗಳ ಅವಧಿ ಪೂರ್ಣಗೊಂಡಿರುವುದರಿಂದ / ಪೂರ್ಣಗೊಳ್ಳಲಿರುವುದರಿಂದ ಅಂಕಣ 2 ರಲ್ಲಿ ನಮೂದಿಸಿರುವ ಅಧಿಕಾರಿಗಳನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ <u>ಆಡಳಿತಾಧಿಕಾರಿಗಳನ್ನಾಗಿ</u> ನೇಮಕ ಮಾಡಿ ಆದೇಶಿಸಿದ್ದೇನೆ.

| ಕ್ರ. ಸಂ. | ಆಡಳಿತಾಧಿಕಾರಿಯಾಗಿ ನೇಮಕಗೊಳಿಸಿರುವ ಅಧಿಕಾರಿಯ ಪದನಾಮ ಮತ್ತು ವಿಳಾಸ | ಗ್ರಾಮ ಪಂಚಾಯಿತ್ತಿಗಳ ಹೆಸರು | ಅವಧಿ ಪೂರ್ಣಗೊಳ್ಳುವ ದಿನಾಂಕ |
|---|---|---|---|
| 1 | 2 | 3 | 4 |
| 1 | ಸಹಾಯಕ ನಿರ್ದೇಶಕರು, ಗ್ರೇಡ್–1, ಸಮಾಜ ಕಲ್ಯಾಣ ಇಲಾಖೆ, ಕೋಲಾರ ತಾಲ್ಲೂಕು | ಜನ್ನಘಟ್ಟ | **09/02/2026** |
| | | ಐತರಾಸನಹಳ್ಳಿ | **07/02/2026** |
| 2 | ಸಹಾಯಕ ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು, ಜಿಲ್ಲಾಧಿಕಾರಿಗಳ ಕಛೇರಿ, ಕೋಲಾರ ತಾಲ್ಲೂಕು | ಮುದುವಾಡಿ | **10/02/2026** |
| | | ಹೋಳೂರು | **08/02/2026** |
| 3 | ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕರು, ಕೋಲಾರ ತಾಲ್ಲೂಕು | ಅರಾಭಿಕೊತ್ತನೂರು | **10/02/2026** |
| | | ಮಾರ್ಜೇನಹಳ್ಳಿ | **08/02/2026** |
| | | ಉರಿಗಿಲಿ | **08/02/2026** |
| 4 | ತಹಶೀಲ್ದಾರ್, ಕೋಲಾರ ತಾಲ್ಲೂಕು | ನರಸಾಪುರ | **07/02/2026** |
| 5 | ಸಹಾಯಕ ಕೃಷಿ ನಿರ್ದೇಶಕರು, ಕೋಲಾರ ತಾಲ್ಲೂಕು | ಚನ್ನಸಂದ್ರ | **08/02/2026** |
| | | ಕೊಂಡರಾಜನಹಳ್ಳಿ | **09/02/2026** |
| 6 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಸಣ್ಣ ನೀರಾವರಿ ಇಲಾಖೆ, ಕೋಲಾರ ತಾಲ್ಲೂಕು | ವಡಗೂರು | **08/02/2026** |
| | | ದೊಡ್ಡಹಸಾಳ | **07/02/2026** |
| | | ಬೆಗ್ಲಿಹೊಸಹಳ್ಳಿ | **07/02/2026** |
| 7 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನೀಯರಿಂಗ್ ಉಪವಿಬಾಗ, ಕೋಲಾರ ತಾಲ್ಲೂಕು | ಮದನಹಳ್ಳಿ | **08/02/2026** |
| | | ಸೀತಿ | **09/02/2026** |
| 8 | ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಕೋಲಾರಮ ತಾಲ್ಲೂಕು | ವಕ್ಕಲೇರಿ | **09/02/2026** |
| | | ಸೂಲೂರು | **07/02/2026** |
| | | ಬೆಳ್ಳೂರು | **09/02/2026** |
| 9 | ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಕೋಲಾರ ತಾಲ್ಲೂಕು. | ಸುಗಟೂರು | **08/02/2026** |
| | | ಮುದುವತ್ತಿ | **07/02/2026** |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಉಪವಿಭಾಗ, ಕೋಲಾರ ತಾಲ್ಲೂಕು. | ತೊರದೇವಂಡಹಳ್ಳಿ | **07/02/2026** |
| | | ಅರಹಳ್ಳಿ | **09/02/2026** |
| 11 | ತಾಲ್ಲೂಕು ಆರೋಗ್ಯಾಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೋಲಾರ ತಾಲ್ಲೂಕು | ಹರಟಿ | **07/02/2026** |
| | | ಬೆಳಮಾರನಹಳ್ಳಿ | **08/02/2026** |
| 12 | ಸಹಾಯಕ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ತಾಲ್ಲೂಕು ಪಂಚಾಯತ್, ಕೋಲಾರ ತಾಲ್ಲೂಕು | ಅಣ್ಣಿಹಳ್ಳಿ | **09/02/2026** |
| | | ತೊಟ್ಲಿ | **08/02/2026** |
| | | ಅಮ್ಮನಲ್ಲೂರು | **08/02/2026** |
| 13 | ವಲಯ ಅರಣ್ಯ ಅಧಿಕಾರಿಗಳು, ಕೋಲಾರ ತಾಲ್ಲೂಕು ತಾಲ್ಲೂಕು | ಕ್ಯಾಲನೂರು | **09/02/2026** |
| | | ಮದ್ದೇರಿ | **07/02/2026** |
| 14 | ಸಹಾಯಕ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಕೋಲಾರ ತಾಲ್ಲೂಕು | ಶಾಪೂರು | **09/02/2026** |
| | | ಹುತ್ತೂರು | **10/02/2026** |
| | | ಹೊನ್ನೇನಹಳ್ಳಿ | **10/02/2026** |

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಸರ್ಕಾರದ ದಿನಾಂಕ : 19/6/2020ರ ಸುತ್ತೋಲೆಯಂತೆ, ಆಡಳಿತಾಧಿಕಾರಿಗಳ ಅಧಿಕಾರ ಮತ್ತು ಕರ್ತವ್ಯಗಳು ಈ ಕೆಳಕಂಡಂತಿರುತ್ತದೆ.

1. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 8(4) ರನ್ವಯ ಆಡಳಿತಾಧಿಕಾರಿಯನ್ನು ಈ ಅಧಿನಿಯಮದ ಉದ್ದೇಶಕ್ಕಾಗಿ ಕ್ರಮಬದ್ಧವಾಗಿ ರಚಿಸಿದ ಗ್ರಾಮ ಪಂಚಾಯಿತಿ ಎಂದು ಭಾವಿಸಲಾಗಿದೆ.
2. ಸದರಿ ಅಧಿನಿಯಮದ ಪ್ರಕರಣ 8(3) ರನ್ವಯ ಆಡಳಿತಾಧಿಕಾರಿಯು ಗ್ರಾಮ ಪಂಚಾಯಿತಿಯ ಎಲ್ಲಾ ಅಧಿಕಾರಗಳನ್ನು ಮತ್ತು ಕರ್ತವ್ಯಗಳನ್ನು ಚಲಾಯಿಸತಕ್ಕದ್ದು ಮತ್ತು ನೆರವೇರಿಸತಕ್ಕದ್ದಾಗಿದೆ.
3. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ರನ್ವಯ ಗ್ರಾಮ ಪಂಚಾಯಿತಿಯ ಹಣಕಾಸಿನ ವ್ಯವಹಾರವನ್ನು ಆಡಳಿತಾಧಿಕಾರಿ ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಜಂಟಿಯಾಗಿ ನಿರ್ವಹಿಸತಕ್ಕದ್ದು.
4. ವಾರ್ಡ್ ಸಭೆ ಮತ್ತು ಗ್ರಾಮ ಸಭೆಗಳನ್ನು ಕಾಲ ಕಾಲಕ್ಕೆ ನಡೆಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು.
5. ಅಧಿನಿಯಮದ ಪ್ರಕರಣ 58 ರಂತೆ ಗ್ರಾಮ ಪಂಚಾಯಿತಿ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು.
6. ಅಧಿನಿಯಮದ ಪ್ರಕರಣ 60 ರಂತೆ ಗ್ರಾಮ ಪಂಚಾಯಿತಿಯ ಸಾಮಾನ್ಯ ಅಧಿಕಾರಿಗಳನ್ನು ಚಲಾಯಿಸತಕ್ಕದ್ದು.
7. ಅಧಿನಿಯಮದ ಪ್ರಕರಣ 62 ರಂತೆ ಅಧ್ಯಕ್ಷನ ಪ್ರಕಾರ್ಯಗಳು ಮತ್ತು ಅಧಿಕಾರಗಳನ್ನು ಚಲಾಯಿಸತಕ್ಕದ್ದು.
8. ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ನಿರ್ವಹಣೆಯನ್ನು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮ ಪಂಚಾಯಿತಿಗಳಿಗೆ ವರ್ಗಾಯಿಸಲಾಗಿದ್ದು, ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ನಿರ್ವಹಣೆ ಮಾಡತಕ್ಕದ್ದು ಮತ್ತು ಗ್ರಂಥಾಲಯ ಮೇಲ್ವಿಚಾರಕರಿಗೆ ಗೌರವಧನವನ್ನು ಮಾಸಿಕವಾಗಿ ಪಾವತಿಸತಕ್ಕದ್ದು.
9. ಗ್ರಾಮ ಪಂಚಾಯಿತಿ ನೌಕರರಿಗೆ ಮಾಸಿಕವಾಗಿ ಕನಿಷ್ಠ ವೇತನ ಪಾವತಿಸತಕ್ಕದ್ದು.
10. ಸರ್ಕಾರದ ಸುತ್ತೋಲೆ ಸಂಖ್ಯೆ ಗ್ರಾಅಪ 74 ಗ್ರಾಪಂಸಿ 2017 (ಭಾಗ-1) ದಿನಾಂಕ : 12/3/2018 ರಲ್ಲಿ ಗ್ರಾಮ ಪಂಚಾಯಿತಿಗಳು ಯಾವುದೇ ಹುದ್ದೆಗಳಿಗೆ ನೇಮಕಾತಿ ಮಾಡುವುದನ್ನು ಸಂಪೂರ್ಣ ನಿಷೇಧಿಸಲಾಗಿದೆ. ಆಡಳಿತಾಧಿಕಾರಿಯು ಗ್ರಾಮ ಪಂಚಾಯಿತಿಗೆ ಯಾವುದೇ ನೌಕರರನ್ನು ನೇಮಕ ಮಾಡಿಕೊಳ್ಳತಕ್ಕದ್ದಲ್ಲ.

ಜಿಲ್ಲಾಧಿಕಾರಿಗಳು,
ಕೋಲಾರ ಜಿಲ್ಲೆ, ಕೋಲಾರ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH